All India Radio: Bangalore
Regional Bulletin In Kannada
25.11.2025 / 2.30 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಆಸ್ಟ್ರೇಲಿಯಾ, ಅಮೆರಿಕ, ಸೌದಿ ಅರೇಬಿಯಾ ದೇಶಗಳಿಗೆ ನಂದಿನಿ ತುಪ್ಪ ರಫ್ತು - ಸರ್ಕಾರದಿಂದ ಹಸಿರು ನಿಶಾನೆ
- ಬೆಂಗಳೂರಿನ ರಾಮನ್ ಸಂಶೋಧನಾ ಸಂಸ್ಥೆಯಿಂದ ನಕ್ಷತ್ರಗಳ ಕುರಿತು ಅಧ್ಯಯನ ನಡೆಸಲು ಪ್ರತುಶ್ ವೈಜ್ಞಾನಿಕ ಉಪಕರಣ ಅಭಿವೃದ್ಧಿ
- ಬೆಂಬಲ ಬೆಲೆ ಯೋಜನೆಯಡಿ ಮೆಕ್ಕೆ ಜೋಳ, ಭತ್ತ ಖರೀದಿ ಕೇಂದ್ರ ಆರಂಭಿಸಲು ಆಗ್ರಹ ; ದಾವಣಗೆರೆಯಲ್ಲಿ ಬಿಜೆಪಿ ಪ್ರತಿಭಟನೆ
- ಕಿರಿಯರ ಹಾಕಿ ಪಂದ್ಯಾವಳಿಯ ವಿಶ್ವಕಪ್ ಟ್ರೋಫಿ ಅನಾವರಣಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

<><><><>

ಆಸ್ಟ್ರೇಲಿಯಾ, ಅಮೆರಿಕಾ ಹಾಗೂ ಸೌದಿ ಅರೇಬಿಯಾ ದೇಶಗಳಿಗೆ ರಾಜ್ಯದ ನಂದಿನಿ ತುಪ್ಪವನ್ನು ರಫ್ತು ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶ ವಿದೇಶಗಳಲ್ಲಿಯೂ ನಂದಿನಿ ತುಪ್ಪಕ್ಕೆ ಬೇಡಿಕೆಯಿದೆ ಎಂದು ಹೇಳಿದ್ದಾರೆ. ಮೈಸೂರು ಜಿಲ್ಲೆಯವರಾದ ಕುಮಾರ ಎಂಬುವರು ಅಮೆರಿಕಾದಲ್ಲಿ ನೆಲೆಸಿದ್ದು, ನಂದಿನಿ ಏಜೆನ್ಸಿ ಪಡೆದಿದ್ದಾರೆ. ಕೆಎಂಎಫ್ ಹಾಗೂ ಕುಮಾರ ಅವರಿಗೆ ಶುಭವಾಗಲಿ ಎಂದು ಮುಖ್ಯಮಂತ್ರಿ ಹಾರೈಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (೨೯ ಸೆಕೆಂಡ್‌ಗಳು)

ಇದೇ ವೇಳೆ, ರಾಜಕೀಯ ಬೆಳವಣಿಗೆ ಕುರಿತಂತೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಶಾಸಕರಿಗೆ ಅವರ ಅಭಿಪ್ರಾಯ ತಿಳಿಸುವ ಸ್ವಾತಂತ್ರ್ಯವಿದ್ದು, ಅಂತಿಮವಾಗಿ ಹೈಕಮಾಂಡ್ ಎಲ್ಲ ಗೊಂದಲಗಳಿಗೆ ತೆರೆ ಎಳೆಯಬೇಕು ಎಂದು ಹೇಳಿದ್ದಾರೆ. ಪಕ್ಷದ ವರಿಷ್ಠರು ಸೂಚನೆ ನೀಡಿದರೆ

ಸಚಿವ ಸಂಪುಟ ವಿಸ್ತರಣೆ ಮಾಡಲಾಗುವುದು ಎಂದು ತಿಳಿಸಿದ್ದಾರೆ. ರಾಹುಲ್ ಗಾಂಧಿಯನ್ನು ಭೇಟಿ ಮಾಡುವ ಯೋಚನೆ ಸದ್ಯಕ್ಕಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಮುಖ್ಯಮಂತ್ರಿಯಾಗಲು ಶಾಸಕರ ಮತ್ತು ಹೈಕಮಾಂಡ್ ಬೆಂಬಲ ಅಗತ್ಯ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಯಾದಗಿರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೈಕಮಾಂಡ್ ಶಾಸಕರ ಅಭಿಪ್ರಾಯ ಪಡೆದು ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಲಾಗಿದೆ. ಈಗ ರಾಜ್ಯದಲ್ಲಿ ಮುಖ್ಯಮಂತ್ರಿ ಸ್ಥಾನ ಖಾಲಿ ಇಲ್ಲ ಎಂದು ಹೇಳಿದ್ದಾರೆ. ಮುಖ್ಯಮಂತ್ರಿ ಹುದ್ದೆ ಬಗ್ಗೆ ಅಂತಿಮ ತೀರ್ಮಾನ ವರಿಷ್ಠರಿಗೆ ಬಿಟ್ಟ ನಿರ್ಧಾರ ಎಂದು ತಿಳಿಸಿದ್ದಾರೆ.

<><><>

ಬೆಂಗಳೂರಿನ ರಾಮನ್ ಸಂಶೋಧನಾ ಸಂಸ್ಥೆಯಲ್ಲಿ ಇಂದು ಅಂತಾರಾಷ್ಟ್ರೀಯ ವಿಜ್ಞಾನ ಮಹೋತ್ಸವ ಅಂಗವಾಗಿ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಸಂಸ್ಥೆಯ ಸಂಶೋಧನಾ ವಿಭಾಗದ ಪ್ರೊ. ಊರ್ಬಶಿ ಸಿನ್ಹಾ, ಕ್ವಾಂಟಮ್ ಕಂಪ್ಯೂಟಿಂಗ್ ಮತ್ತು ಕ್ವಾಂಟಮ್ ಸಂವಹನ ವಿಷಯದಲ್ಲಿ ಉಪನ್ಯಾಸ ನೀಡಿದರು. ಭಾರತದ ಮೊದಲ ಕ್ವಾಂಟಮ್ ಸಂವಹನ ಪ್ರಯೋಗಾಲಯವನ್ನು ತಮ್ಮ ಸಂಸ್ಥೆ ಹೊಂದಿದ್ದು, ಫೋಟಾನ್‌ಗಳ ಮೂಲಕ ಕ್ವಾಂಟಮ್ ತಂತ್ರಜ್ಞಾನ ಬಳಸಿ ಸಂವಹನ ಕ್ಷೇತ್ರದಲ್ಲಿ ಮಹತ್ವದ ಸಂಶೋಧನೆ ನಡೆಯುತ್ತಿದೆ. ದೇಶದ ಭದ್ರತಾ ದೃಷ್ಟಿಯಿಂದ ಈ ಯೋಜನೆ ಮಹತ್ವ ಪಡೆದಿದೆ ಎಂದರು. ಸೃಷ್ಟಿಯ ಮೂಲ ಹಾಗೂ ಗತಕಾಲದ ವೈಜ್ಞಾನಿಕ ಸಂಸ್ಕರಣೆಗಳ ಅಧ್ಯಯನಕ್ಕೆ ಕ್ವಾಂಟಮ್ ಸಂಶೋಧನಾ ಸಂಸ್ಥೆ ಪ್ರತುಶ್ ಎಂಬ ವೈಜ್ಞಾನಿಕ ಉಪಕರಣವನ್ನು ತಯಾರುಮಾಡಿದೆ. ಈ ಉಪಕರಣವನ್ನು ಇಸ್ರೋ ರಾಕೆಟ್ ಮೂಲಕ ಚಂದ್ರನ ಸುತ್ತ ಕಕ್ಷೆಯಲ್ಲಿ ನೆಲೆಸುವ ಪ್ರಯತ್ನ ನಡೆಸಲಿದೆ. ಭೂಮಿಗೆ ಗೋಚರವಿಲ್ಲದ ಚಂದ್ರನ ಹಿಂಬದಿಯಲ್ಲಿ ಟೆಲಿಸ್ಕೋಪ್‌ನಂತೆ ಕಾರ್ಯನಿರ್ವಹಿಸುವ ಪ್ರತುಶ್ ನಕ್ಷತ್ರಗಳ ಹುಟ್ಟಿನ ಗುಟ್ಟನ್ನು ಬಹಿರಂಗಪಡಿಸುವ ಪ್ರಯತ್ನ ಮಾಡಲಿದೆ ಎಂದು ತಿಳಿಸಿದ್ದಾರೆ. ಈ ಕುರಿತಂತೆ ಪ್ರೊ. ಮಯೂರಿ ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಧ್ವನಿ : ಪ್ರೊಫೆಸರ್ ಮಯೂರಿ (೩೬ ಸೆಕೆಂಡ್‌ಗಳು)

<><><>

ಡಿಸೆಂಬರ್ ೮ ರಿಂದ ೧೯ರವರೆಗೆ ಬೆಳಗಾವಿ ಸುವರ್ಣಸೌಧದಲ್ಲಿ ವಿಧಾನ ಮಂಡಲ ಅಧಿವೇಶನ ನಡೆಯಲಿದೆ ಎಂದು ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಮಾತನಾಡಿದ ಅವರು, ಅಧಿವೇಶನ ನಡೆಸಲು ಪೂರಕವಾಗಿ ಸರ್ವ ರೀತಿಯ ವ್ಯವಸ್ಥೆ ಮಾಡಲು ಈಗಾಗಲೇ ಸೂಚನೆ ನೀಡಲಾಗಿದೆ. ಪ್ರತಿಭಟನೆ, ಬೇಡಿಕೆ ಸಲ್ಲಿಸುವವರಿಗೂ ಪ್ರತ್ಯೇಕವಾಗಿ ಸ್ಥಳ ನಿಗದಿ ಮಾಡಲಾಗಿದೆ ಎಂದು ಹೇಳಿದ್ದಾರೆ. ಸುವರ್ಣ ಸೌಧದಲ್ಲಿ ಹೊಸದಾಗಿ ನಿರ್ಮಾಣವಾಗಿರುವ ಉದ್ಯಾನವನ ಉದ್ಘಾಟನೆ ಹಾಗೂ ಜಗತ್ತಿನ ಎರಡನೇ ಅತಿ ಉದ್ದದ ಭಾರತೀಯ ರಾಷ್ಟ್ರಧ್ವಜದ ಪ್ರದರ್ಶನ ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಬೆಂಬಲ ಬೆಲೆ ಯೋಜನೆಯಡಿ ಮೆಕ್ಕೆಜೋಳ ಮತ್ತು ಭತ್ತ ಖರೀದಿ ಕೇಂದ್ರ ಆರಂಭಿಸಬೇಕೆಂದು ಆಗ್ರಹಿಸಿ ದಾವಣಗೆರೆಯಲ್ಲಿಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು. ಅಂಬೇಡ್ಕರ್ ವೃತ್ತದಿಂದ ಉಪವಿಭಾಗಾಧಿಕಾರಿ ಕಚೇರಿವರೆಗೆ ಎತ್ತಿನ ಬಂಡಿಯೊಂದಿಗೆ ಪ್ರತಿಭಟನೆ ಮೂಲಕ ಸಾಗಿ ಕೆಲಕಾಲ ರಸ್ತೆ ತಡೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಬಿ.ವೈ. ವಿಜಯೇಂದ್ರ, ರಾಜ್ಯ ಸರ್ಕಾರದ ರೈತ ವಿರೋಧಿ ನೀತಿಗಳಿಂದಾಗಿ ರಾಜ್ಯದಲ್ಲಿ ರೈತರ ಆತ್ಮಹತ್ಯೆ ಸಂಖ್ಯೆ ಹೆಚ್ಚಾಗಿದೆ ಎಂದು ಆರೋಪಿಸಿದ್ದಾರೆ. ರಾಜ್ಯ ಸರ್ಕಾರ ಖರೀದಿ ಕೇಂದ್ರ ತೆರೆಯದ ಪರಿಣಾಮ ರಾಜ್ಯದಲ್ಲಿ ಮೆಕ್ಕೆಜೋಳ ಬೆಲೆ ಕುಸಿತವಾಗಿದೆ ಇದರಿಂದ ದಾವಣಗೆರೆ ಸೇರಿದಂತೆ ಮೆಕ್ಕೆಜೋಳ ಬೆಳೆಯುವ ಪ್ರದೇಶದ ರೈತರಿಗೆ ತೀವ್ರ ನಷ್ಟ ಉಂಟಾಗಿದೆ ಎಂದು ಹೇಳಿದ್ದಾರೆ.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ವಿಧಾನಸೌಧದ ತಮ್ಮ ಕಚೇರಿಯಲ್ಲಿ ಪುರುಷರ ಕಿರಿಯರ ಹಾಕಿ ಪಂದ್ಯಾವಳಿಯ ವಿಶ್ವಕಪ್ ಟ್ರೋಫಿಯನ್ನು ಅನಾವರಣಗೊಳಿಸಿದರು. ಕರ್ನಾಟಕ ಒಲಿಂಪಿಕ್ ಅಸೋಸಿಯೇಷನ್ ಅಧ್ಯಕ್ಷ ಗೋವಿಂದರಾಜು, ಪದ್ಮಶ್ರೀ ಪುರಸ್ಕೃತ ಧನಂಜಯ್ ಪಿಳ್ಳೈ, ಅರ್ಜುನ ಪ್ರಶಸ್ತಿ ಪುರಸ್ಕೃತ ಡಾ.ಎ.ಬಿ.ಸುಬ್ಬಯ್ಯ, ಕರ್ನಾಟಕ ಹಾಕಿ ಅಸೋಸಿಯೇಷನ್ ಕಾರ್ಯದರ್ಶಿ ವಿ.ಆರ್.ರಘುನಾಥ್ ಸಮ್ಮುಖದಲ್ಲಿ ಟ್ರೋಫಿ ಅನಾವರಣಗೊಳಿಸಲಾಯಿತು.

<><><><>

ನೇಪಾಳ ವಿರುದ್ಧ ಐತಿಹಾಸಿಕ ಗೆಲುವು ಸಾಧಿಸಿದ್ದಕ್ಕಾಗಿ ಬೆಂಗಳೂರಿನಲ್ಲಿ ಭಾರತದ ಅಂಧ ಮಹಿಳಾ ಟಿ-೨೦ ಕ್ರಿಕೆಟ್ ತಂಡವನ್ನು ಬಿಜೆಪಿ ಸನ್ಮಾನಿಸಿತು. ಬಳಿಕ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಭಾರತ ತಂಡದ ಗೆಲುವು ಐತಿಹಾಸಿಕ ಸಾಧನೆ ಎಂದು ಬಣ್ಣಿಸಿದರು. ಕಠಿಣ ಪರಿಶ್ರಮ, ತಂಡದ ಕೆಲಸ ಮತ್ತು ಬದ್ಧತೆಯಿಂದ ಸಾಧ್ಯವಾಯಿತು ಎಂದು ಹೇಳಿದರು.

<><><><>

ಕೇಂದ್ರ ಸರ್ಕಾರ ಕಾರ್ಮಿಕರ ಹಿತದೃಷ್ಟಿಯಿಂದ ಜಾರಿಗೊಳಿಸಿದ ನಾಲ್ಕು ಕಾರ್ಮಿಕ ಸಂಹಿತೆಗಳಿಂದಾಗಿ ಕಾರ್ಮಿಕರ ಬದುಕಲ್ಲಿ ಹೊಸ ಆಶಾಕಿರಣ ಮೂಡಿದೆ ಎಂದು ಕಾರ್ಮಿಕ ಮುಖಂಡ, ಭಾರತೀಯ ಮಜ್ದೂರ್ ಸಂಘದ ರಾಜ್ಯ ಕಾರ್ಯದರ್ಶಿ ಜಯರಾಮ್ ಬಿ ಸಾಲ್ಯಾನ್ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಹೊಸ ಕಾರ್ಮಿಕರ ಸಂಹಿತೆಗಳಿಂದಾಗಿ, ಅಸಂಘಟಿತ ಕಾರ್ಮಿಕರಿಗೆ ಹೆಚ್ಚು ಪ್ರಯೋಜನಕಾರಿಯಾಗಿದೆ. ಇದು ದೇಶದ ಪ್ರತಿಯೊಬ್ಬ ಕಾರ್ಮಿಕರು ಹೆಮ್ಮೆ ಪಡಬೇಕಾದ ವಿಷಯ ಎಂದು ಹೇಳಿದ್ದಾರೆ.

ಧ್ವನಿ : ಜಯರಾಮ್ ಬಿ ಸಾಲ್ಯಾನ್ (೨೯ ಸೆಕೆಂಡ್‌ಗಳು)

<><><><>

೧೪ ವರ್ಷದೊಳಗಿನ ಬಾಲಕರು ಹಾಗೂ ಬಾಲಕಿಯರನ್ನು ಕೆಲಸಕ್ಕೆ ಸೇರಿಸುವುದು ಕಾನೂನು ಬಾಹಿರ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಸುಬ್ರಮಣ್ಯ ತಿಳಿಸಿದ್ದಾರೆ. ಕಾರ್ಮಿಕ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿ ವಿರುದ್ಧ ಜಾಗೃತಿ ಮತ್ತು ಅರಿವು ಕಾರ್ಯಕ್ರಮದ ಅಂಗವಾಗಿ ಆಯೋಜಿಸಲಾಗಿದ್ದ ಬೀದಿ ನಾಟಕ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಪೋಷಕರು ಮಕ್ಕಳನ್ನು ಕೆಲಸಕ್ಕೆ ಕಳುಹಿಸದೆ ಕಡ್ಡಾಯವಾಗಿ ಶಿಕ್ಷಣ ಒದಗಿಸಬೇಕು ಎಂದು ಕರೆ ನೀಡಿದರು. ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ದೇಶದ ಅಭಿವೃದ್ಧಿಗೆ ಪೋಷಕರು ಹಾಗೂ ಸಮಾಜ ಸಾಕ್ಷಿಯಾಗಬೇಕು ಎಂದು ಕಿವಿಮಾತು ಹೇಳಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>